ದಿನಾಂಕ: 02.07.2022 ರಂದು ಮದ್ಯಾಹ್ನ 3:00 ಗಂಟೆಗೆ ವಾರ್ಡ್ ಸಂಖ್ಯೆ 180 ಬನಶಂಕರಿ ದೇವಸ್ಥಾನ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡುವಳಿಗಳು.

*ಹಾಜರಿದ್ದ ಅಧಿಕಾರಿಗಳು:-*

1. ಶ್ರೀ. ಸತೀಶ್ ಕುಮಾರ್ – ಅಧ್ಯಕ್ಷರು ಮತ್ತು ನೋಡೆಲ್ ಅಧಿಕಾರಿಗಳು.
2. ಶ್ರೀ. ಮಂಜುನಾಥ್ ವೆಂಕಣ್ಣ ನಾಯಕ – ಸಹಾಯಕ ಅಭಿಯಂತರರು (ವಾಡ್ 180 ಬನಶಂಕರಿ ದೇವಸ್ಥಾನ) (ಕಿಯೋನಿಕ್ಸ್)
3. ಶ್ರೀ. ಶಿವರುದ್ರಯ್ಯ – ಹಿ.ಆ.ಪ (ವಾಡ್ 180 ಬನಶಂಕರಿ ದೇವಸ್ಥಾನ)
4. ಶ್ರೀಮತಿ. ಅಂಬಿಕ – ಕಿ.ಆ.ಪ (ವಾಡ್ 180 ಬನಶಂಕರಿ ದೇವಸ್ಥಾನ)
5. ಶ್ರೀ. Syed Muiez – ಸಹಾಯಕ ಅಭಿಯಂತರರು, ಬಿಡಬ್ಲ್ಯೂಎಸ್ಎಸ್‌ಬಿ.

ಮೇಲೆ ಹಾಜರಿದ್ದ ಅಧಿಕಾರಿಗಳು ಹಾಗೂ ಸಮಿತಿ ಸದಸ್ಯರ ಸಮ್ಮುಖದಲ್ಲಿ ವಾರ್ಡ್ ಸಂಖ್ಯೆ 180 ರ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು (ಕಿಯೋನಿಕ್ಸ್) ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆ ಸೇರಿರುವ ಉದ್ದೇಶ ಮತ್ತು ಸಭೆಯ ಮಹತ್ವವನ್ನು ಸದಸ್ಯರ ಮುಖ ಪರಿಚಯದೊಂದಿಗೆ ವಿವರಿಸುತ್ತಾ, ಹಾಜರಿದ್ದ ಸದಸ್ಯರಿಗೆ ಹಾಗೂ ಅಧಿಕಾರಿಗಳಿಗೆ ಸ್ವಾಗತ ಕೋರಿದರು.

ಈ ಹಿಂದಿನ ಸಭೆಯಲ್ಲಿ ನಡೆಯುದ ವಿಷಯಗಳ ಬಗ್ಗೆ ಸುಧೀರ್ಘವಾಗಿ ಚರ್ಚಿಸಲಾಯಿತು. ಅಧಿಕಾರಿಗಳಿಗೆ ನಿಗಧಿತ ಅವಧಿಯೊಳಗೆ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿ, ಈ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಲಾಯಿತು.

1. ವಾರ್ಡ್‌ನಲ್ಲಿ ಘನತ್ಯಾಜ್ಯ ಸಂಗ್ರಹಣೆ ಮತ್ತು ಡೆಬ್ರಿಸ್ ವಿಲೇವಾರಿ ಬಗ್ಗೆ.

ಉಮಾರ್‌ಭಾಗ್ ಲೇಔಟ್ ಮುಖ್ಯರಸ್ತೆಯಲ್ಲಿ ಕಸ ಹಾಕುತ್ತಿರುವುದರಿಂದ ಸಾರ್ವಜನಿಕರಿಗೆ ಓಡಾಡಲು ತೊಂದರೆ ಉಂಟಾಗಿರುತ್ತದೆ ಎಂದು ಸಾರ್ವಜನಿಕರು ದೂರಿದರು. ಸದರಿಗೆ ಸಂಬಂಧಿಸಿದಂತೆ ಸದರಿ ಕಸವನ್ನು ನಿಲೇವಾರಿ ಮಾಡಿ ಸ್ವಚ್ಚಗೊಳಿಸಲು ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಲಾಯಿತು.

2. ವಾರ್ಡ್‌ನ ವಿವಿಧ ಕಾಮಗಾರಿಗಳ ಅಭಿವೃದ್ಧಿ ಕಾರ್ಯಗಳ ಬಗ್ಗೆ.

ವಾರ್ಡ್ ವ್ಯಾಪ್ತಿಯ ಗಂಗಾಧರನಗರದಲ್ಲಿರುವ ಆರ್ ಆರ್ ಆಸ್ಪತ್ರೆಯ ಕಟ್ಟಡದ ಮುಂಭಾಗದ ಚರಂಡಿಯಲ್ಲಿ ವ್ಯಾತ್ಯಾಸವಾಗಿರುವುದರಿಂದ ಪಕ್ಕದ ಮನೆಯ ಚರಂಡಿಯು ತುಂಬಿರುತ್ತದೆ ಎಂದು ದೂರು ಸಲ್ಲಿಸಿರುತ್ತಾರೆ. ಅದರಂತೆ ಸದರಿ ಚರಂಡಿಯಲ್ಲಿ ಹೂಳು ತೆಗೆದು ನೀರು ಸರಾಗವಾಗಿ ಹರಿಯುವಂತೆ ಕ್ರಮ ಕೈಗೊಳ್ಳಲು ಸಹಾಯಕ ಅಭಿಯಂತರರಿಗೆ ಸೂಚಿಸಲಾಯಿತು.

ಉಮಾರ್‌ಭಾಗ್ ಲೇಔಟ್ ಮುಖ್ಯರಸ್ತೆಯಲ್ಲಿರುವ ಖಾಲಿ ಸೈಟ್‌ನ ಮುಂಭಾಗದಲ್ಲಿರುವ ಚರಂಡಿಯಲ್ಲಿ ಹೂಳು ತುಂಬಿದ್ದು ಸದರಿ ಚರಂಡಿಯಲ್ಲಿ ಹರಿಯುವ ನೀರು ರಸ್ತೆಯಲ್ಲಿ ಹರಿಯುತಿದ್ದು ಸಾರ್ವಜನಿಕರಿಗೆ ತುಂಬಾ ತೊಂದರೆಯಾಗಿರುತ್ತದೆ ಎಂದು ದೂರು ಸಲ್ಲಿಸಿರುತ್ತಾರೆ. ಸದರಿ ಚರಂಡಿಯಲ್ಲಿ ಹೂಳು ತೆಗೆದು ಸ್ವಚ್ಚಗೊಳಿಸುವಂತೆ ಸಹಾಯಕ ಅಭಿಯಂತರರಿಗೆ ಸೂಚಿಸಲಾಯಿತು.

ಟೀಚರ್ಸ್ ಕಾಲೋನಿಯ 6ನೇ ಅಡ್ಡರಸ್ತೆಯು ತುಂಬಾ ಹಾಳಾಗಿದ್ದು ವಾಹನ ಸವಾರರಿಗೆ ತೊಂದರೆ ಉಂಟಾಗುತ್ತಿರುತ್ತದೆ. ಆದ್ದರಿಂದ ಸದರಿ ರಸ್ತೆಗೆ ಡಾಮಬರೀಕರಣ ಮಾಡಿಕೊಡುವಂತೆ ಸಾರ್ವಜನಿಕರು ಕೋರಿರುತ್ತಾರೆ. ಅದರಂತೆ ಸದರಿ ರಸ್ತೆಗೆ ತುರ್ತಾಗಿ ಡಾಂಬರೀಕರಣ ಮಾಡಲಾಗುವುದು ಎಂದು ಸಹಾಯಕ ಅಭಿಯಂತರರು ತಿಳಿಸಿದರು.

ಫಿಕ್ಸ್ ಮೈ ಸ್ಟ್ರೀಟ್ (FIX MY STREET) ಆ್ಯಪ್‌ನಲ್ಲಿ ರಸ್ತೆಗುಂಡಿಗಳ ಬಗ್ಗೆ ದೂರು ಬಂದಿದ್ದ ಮೇರೆಗೆ ಟೀಚರ್ಸ್ ಕಾಲೋನಿ ಮುಖ್ಯರಸ್ತೆಯಲ್ಲಿ ರಸ್ತೆಗುಂಡಿಗಳನ್ನು ಮುಚ್ಚಲಾಗಿರುತ್ತದೆ ಎಂದು ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ 180 ರವರು ತಿಳಿಸಿರುತ್ತಾರೆ.

ಗಂಗಾಧರನಗರ ಕನಕಪುರ ರಸ್ತೆಯ ಚರಂಡಿಯು ತುಂಬಿ ರಸ್ತೆಯಲ್ಲಿ ನೀರು ಹರಿಯುತ್ತಿರುತ್ತದೆ ಎಂದು ಸಾರ್ವಜನಿಕರು ತಿಳಿಸಿದ ಮೇರೆಗೆ ಸದರಿಯನ್ನು ಸರಿಪಡಿಸಲು ರಸ್ತೆ ಮತ್ತು ಮೂಲಭೂತ ಸೌಕರ್ಯ ರವರಿಗೆ ಸೂಚಿಸಲಾಯಿತು.

ಸರಬಂಡೆಪಾಳ್ಯದ ಗಂಗಮ್ಮ ದೇವಸ್ಥಾನ ರಸ್ತೆಯಲ್ಲಿ ಮ್ಯಾನ್ ಹೋಲ್‌ನಲ್ಲಿ ನೀರು ತುಂಬಿ ರಸ್ತೆಯಲ್ಲಿ ಹರಿಯುತ್ತಿರುತ್ತದೆ ಎಂದು ಸಾರ್ವಜನಿಕರು ತಿಳಿಸಿರುತ್ತಾರೆ. ಅದರಂತೆ ಸದರಿ ಮ್ಯಾನ್‌ಹೋಲ್ ಅನ್ನು ಕೂಡಲೇ ಸರಿ ಪಡಿಸಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡುವಂತೆ ಬಿಡಬ್ಲ್ಯೂಎಸ್‌ಎಸ್‌ಬಿ ರವರಿಗೆ ಸೂಚಿಸಿಲಾಯಿತು.

ಟೀಚರ್ಸ್ ಕಾಲೋನಿ 4ನೇ ಅಡ್ಡರಸ್ತೆಯಲ್ಲಿ ಕುಡಿಯುವ ನೀರಿನ ವಾಲ್ ತೊಂದರೆಯಾಗಿರುತ್ತದೆ ಸದರಿಯನ್ನು ಸರಿಪಡಿಸಿಕೊಡಲು ಬಿಡಬ್ಲ್ಯೂಎಸ್‌ಎಸ್‌ಬಿ ರವರಿಗೆ ಸೂಚಿಸಿಲಾಯಿತು.

ವಾರ್ಡ್ ವ್ಯಾಪ್ತಿಯಲ್ಲಿ ಪ್ರತಿದಿನ ಕಸವನ್ನು ಸ್ವಚ್ಛಗೊಳಿಸಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡುವಂತೆ ಕಿರಿಯ ಆರೋಗ್ಯ ಪರಿವೀಕ್ಷಕರು ರವರಿಗೆ ಸೂಚಿಸಲಾಯಿತು.

ಈ ಎಲ್ಲಾ ವಿಷಯದ ಬಗ್ಗೆ ಚರ್ಚಿಸಲಾಗಿ ಸೂಕ್ತ ಕ್ರಮ ಕೈಗೊಳ್ಳುವ ನಿರೀಕ್ಷಣೆಯೊಂದಿಗೆ ಸಮಿತಿಯ ಅಧ್ಯಕ್ಷರು ಹಾಗೂ ನೋಡೆಲ್ ಅಧಿಕಾರಿಗಳಾದ ಶ್ರೀ. ಸತೀಶ್ ಕುಮಾರ್ ರವರು ಎಲ್ಲರಿಗೂ ವಂದನೆಗಳನ್ನು ಕೋರುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

Satishkumar 21/07/22

ನೋಡೆಲ್ ಅಧಿಕಾರಿ
ವಾರ್ಡ್ ಸಂಖ್ಯೆ 180
ಬನಶಂಕರಿ ದೇವಸ್ಥಾನ